# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ/ವಾರ್ಡ್ ಸಮಿತಿ ಸಹಾಯಕ ಅಭಿಯಂತರರ ಕಛೇರಿ ವಾರ್ಡ್ ಸಂಖ್ಯೆ: 138 ಛಲವಾದಿಪಾಳ್ಯ ಬೆಂಗಳೂರು

ಸಂಖ್ಯೆ: W-138/Committee-06-01/2022-23 Dt: 04/06/2022

## ವಾರ್ಡ್ ಹಂತದ ಸಮಿತಿ ಸಭೆ

ವಾರ್ಡ್–138

ದಿನಾಂಕ: 04/06/2022 ರಂದು ಬೆಳಗ್ಗೆ 10.00 ಗಂಟೆಗೆ ವಾರ್ಡ್ ಸಂಖ್ಯೆ:138 ಛಲವಾದಿಪಾಳ್ಯ ವಾರ್ಡ್ ಹಂತದ ಸಮಿತಿ ಸಭೆಯನ್ನು ಶ್ರೀ. ಮೊಹಮ್ಮದ್ ಜಾಫರ್ ಸಾಧಿಕ್ ಸಹಾಯಕ ಕಾರ್ಯಪಾಲಕ ಅಭಿಯಂತರರು, ಜಂಟಿ ನಿರ್ದೇಶಕರು (ನಗರ ಯೋಜನೆ –ದಕ್ಷಿಣ) ಬಿಬಿಎಂಪಿ ಹಾಗೂ ಅಧ್ಯಕ್ಷರು ಮತ್ತು ವಾರ್ಡಿನ ನೋಡಲ್ ಅಧಿಕಾರಿ ವಾರ್ಡ್ ಸಂಖ್ಯೆ: 138 ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಯಿತು.

### ಸಭೆಯಲ್ಲಿ ಚರ್ಚಿಸಲಾದ ವಿಷಯಗಳು

ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳ ಬಗ್ಗೆ ಗಮನಹರಿಸುತ್ತಾ ಹಾಗೂ ಸಾರ್ವಜನಿಕರಿಂದ ಬಂದ ದೂರುಗಳನ್ನು ಪರಿಹರಿಸಿದ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಕಸ ವಿಲೇವಾರಿ ಬಗ್ಗೆ ದೂರು ಸಲ್ಲಿಕೆಯಾಗಿರುತ್ತದೆ. ಈ ಬಗ್ಗೆ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಪೌರಕಾರ್ಮಿಕರ ಕೊರತೆ ಇರುವುದರ ಬಗ್ಗೆ ತಿಳಿಸಿರುತ್ತಾರೆ ಹಾಗೂ ಪೌರಕಾರ್ಮಿಕರ ಅವಶ್ಯಕತೆಯಿರುವುದರಿಂದ ಹೊಸದಾಗಿ ನಿಯೋಜಿಸಲು ಮನವಿ ಮಾಡಿರುತ್ತಾರೆ.

ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಕಂದಾಯ ನಿರೀಕ್ಷಕರನ್ನು ಹಿಂದಿನ ಮಾಹೆಯಲ್ಲಿ ವಸುಲಾತಿಯಾದ ತೆರಿಗೆಯ ಬಗ್ಗೆ ವಿವರಣೆ ಕೋರಿದರು.

ಕಂದಾಯ ನಿರೀಕ್ಷಕರು ಮಾತನಾಡಿ ತೆರಿಗೆ ವಸೂಲಾದ ಬಗ್ಗೆ ಸಭೆಯಲ್ಲಿ ತಿಳಿಸಿದರು ಹಾಗೂ ಮೇ ಮಾಹೆಯಲ್ಲಿ ಶೇ.5 ರಷ್ಟು ತೆರಿಗೆ ವಿನಾಯಿತಿಯು ಮುಕ್ತಾಯಗೊಂಡಿರುವುದನ್ನು ಸಭೆಯಲ್ಲಿ ತಿಳಿಸಿದರು.

BWSSB ವಾರ್ಡ್–138 ವ್ಯಾಪ್ತಿಗೆ ಸಂಬಂಧಿಸಿದಂತೆ ಸಭೆಯಲ್ಲಿ ಯಾವುದೇ ದೂರುಗಳು ಬಂದಿರುವುದಿಲ್ಲ.

ಶ್ರೀ. ಮುಸ್ತಾಕ್ ಷರೀಫ್ ರವರು ಸಭೇಯಲ್ಲಿ ಮಾತನಾಡಿ ಓಲ್ಡ್ ಪೆನ್ಷನ್‌ಮೊಹಲ್ಲಾದಲ್ಲಿ 5,6, ಮತ್ತು 7ನೇ ಅಡ್ಡರಸ್ತೆಗಳಲ್ಲಿ ಮಳೆನೀರಿನ ಸಮಸ್ಯೆಯನ್ನು ವ್ಯಕ್ತಪಡಿಸಿರುತ್ತಾರೆ.

ಪ್ರ.ತಿ.ನೋ

ಮಳೆಗಾಲದ ನಿಯಂತ್ರಣ ಕೊಠಡಿಯಿಂದ ಸಮಸ್ಯೆಯನ್ನು ಬಗೆಹರಿಸಲು ನೋಡಲ್ ಅಧಿಕಾರಿಗಳು ಕಾರ್ಯದರ್ಶಿಗಳಿಗೆ ಸೂಚಿಸಿರುತ್ತಾರೆ.

ಈ ವಿಷಯದ ಬಗ್ಗೆ ಮಾನ್ಯ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್ ವ್ಯಾಪ್ತಿಯಲ್ಲಿ ಬಂದಂತಹ ದೂರುಗಳು ಹಾಗೂ ಗ್ಯಾಂಗ್‌ಮೆನ್ ಮತ್ತು ಟ್ರ್ಯಾಕ್ಟರ್ ಮತ್ತು ಕೂಲಿ ಕಾರ್ಮಿಕರನ್ನು ಉಪಯೋಗಿಸಿಕೊಂಡು ತಕ್ಷಣ ದೂರುಗಳನ್ನು ಪರಿಶೀಲಿಸಿ ಕಾರ್ಯನಿರ್ವಹಿಸಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ಕಾರ್ಯದರ್ಶಿಗಳಿಗೆ ಸೂಚಿಸಿ ಮುಂದಿನ ಅನುದಾನದಲ್ಲಿ ಮೋರಿಯಿಂದ ಹೂಳು ತೆಗೆಯಲು ಮಳೆನೀರಿನ ಸಮಸ್ಯೆ ಉಂಟಾಗದಂತೆ ಕ್ರಮವಹಿಸಲು ಸೂಚಿಸಿದರು.

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು ಸಭೆಯ ನಡವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ಕಾರ್ಯದರ್ಶಿ ಮತ್ತು<br>ಕಿರಿಯ ಅಭಿಯಂತರರು | ಅಧ್ಯಕ್ಷರು &<br>ನೋಡಲ್ ಅಧಿಕಾರಿ |